ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER: ದಿನಾಂಕ : DATE :

# ಇಂದು ಬೆಳಗಾವಿಗೆ ಸಿಎಂ: ಅಂಗಡಿ ಕುಟುಂಬಕ್ಕೆ ಸಾಂತ್ವನ

ಬೆಂಗಳೂರು: ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ಬುಧವಾರ ಬೆಳಗಾವಿಗೆ ತೆರಳಲಿದ್ದಾರೆ. ಇತ್ತೀಚೆಗೆ ನಿಧನ ಹೊಂದಿದ ರೇಲ್ವೆ ಖಾತೆ ರಾಜ್ಯ ಸಚಿವ ಸುರೇಶ್ ಅಂಗಡಿ ಅವರ ಕುಟುಂಬದ ಸದಸ್ಯರನ್ನು ಭೇಟಿ ಮಾಡಿ ಸಾಂತ್ವನ ಹೇಳಲಿದ್ದಾರೆ. ಬೆಳಗ್ಗೆ 8:30ಕ್ಕೆ ಬೆಂಗಳೂರಿನಿಂದ ವಿಶೇಷ ವಿಮಾನದಲ್ಲಿ ಬೆಳಗಾವಿಗೆ ತೆರಳಲಿರುವ ಮುಖ್ಯಮಂತ್ರಿಗಳು ಅಲ್ಲಿನ ವಿಶ್ವೇಶ್ವರನಗರದಲ್ಲಿರುವ ಅಂಗಡಿ ಅವರ ನಿವಾಸಕ್ಕೆ ಭೇಟಿ ನೀಡಿ ಕುಟುಂಬದ ಸದಸ್ಯರಿಗೆ ಸಾಂತ್ವನ ಹೇಳಲಿದ್ದಾರೆ. ಬಳಿಕ ಮಧ್ಯಾಹ್ನ ಬೆಂಗಳೂರಿಗೆ ವಾಪಸಾಗಲಿದ್ದಾರೆ ಎಂದು ಮುಖ್ಯಮಂತ್ರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.